೬

## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 230
2. ಮಾನ್ಯ ಸದಸ್ಯರ ಹೆಸರು : ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 12.08.2025
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ಸಕ್ಕರೆ ಕಂಪನಿಗಳು ಯಾವುವು; (ಜಿಲ್ಲಾವಾರು ಮಾಹಿತಿ ನೀಡುವುದು)</td><td>2024-25ನೇ ಹಂಗಾಮಿನಲ್ಲಿ ಒಟ್ಟು 79 ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವ ಕಾರ್ಯವನ್ನು ನಿರ್ವಹಿಸಿರುತ್ತವೆ. ಕಾರ್ಖಾನೆಗಳ ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಿದೆ.</td></tr>
<tr><td>(ಆ)</td><td>ಈ ಸಕ್ಕರೆ ಕಾರ್ಖಾನೆಗಳು ಪ್ರತಿ ವರ್ಷ ಅರೆಯುತ್ತಿರುವ ಕಬ್ಬಿನ ಪ್ರಮಾಣಗಳೇನು;</td><td>2024-25ನೇ ಹಂಗಾಮಿನಲ್ಲಿ ಒಟ್ಟು 79 ಸಕ್ಕರೆ ಕಾರ್ಖಾನೆಗಳಲ್ಲಿ 521.67 ಲಕ್ಷ ಮೆ.ಟನ್ ಕಬ್ಬನ್ನು ನುರಿಸಿ, 41.83 ಲಕ್ಷ ಮ. ಟನ್ ಸಕ್ಕರೆ ಉತ್ಪಾದಿಸಲಾಗಿರುತ್ತದೆ.</td></tr>
<tr><td>(ಇ)</td><td>ರೈತರಿಗೆ ಬಿಲ್ ಪಾವತಿ ಉಳಿಸಿಕೊಂಡಿರುವ ಕಾರ್ಖಾನೆಗಳು ಯಾವುವು; ಅದಕ್ಕೆ ಕಾರಣಗಳೇನು;</td><td>2024-25ನೇ ಹಂಗಾಮಿನ ಕಬ್ಬು ಬಿಲ್ಲು ಪಾವತಿಗೆ ಸಂಬಂಧಿಸಿದಂತೆ ದಿನಾಂಕ:31.07.2025ರ ಅಂತ್ಯಕ್ಕೆ 05 ಸಕ್ಕರೆ ಕಾರ್ಖಾನೆಗಳು ರೈತರ ಕಬ್ಬಿನ ಬಿಲ್ಲನ್ನು ಪಾವತಿಸುವುದು ಬಾಕಿ ಇದ್ದು ವಿವರಗಳು ಈ ಕೆಳಕಂಡಂತಿವೆ
<table>
<tr><th>ಕ್ರ.ಸಂ</th><th>ಕಾರ್ಖಾನೆಯ ಹೆಸರು</th><th>ಬಾಕಿ ಮೊತ್ತ (ರೂ.ಕೋಟಿ ಗಳಲ್ಲಿ)</th></tr>
<tr><td>1</td><td>ಭಾಲ್ಕೇಶ್ವರ ಶುಗರ್ಸ್ ಲಿಮಿಟೆಡ್, ಬಾಜೋಳಗಾ, ಭಾಲ್ಕಿ ತಾಲೂಕು., ಬೀದರ್ ಜಿಲ್ಲೆ</td><td>3.73</td></tr>
<tr><td>2</td><td>ಸೋಮೇಶ್ವರ ಸಹಕಾರಿ ಸಕ್ಕರೆ ಕಾರ್ಖಾನೆ ನಿ. ಸಿದ್ಧಸಮುದ್ರ, ಬೈಲಹೊಂಗಲ ತಾಲೂಕು. ಬೆಳಗಾವಿ ಜಿಲ್ಲೆ</td><td>5.63</td></tr>
<tr><td>3</td><td>ಶ್ರೀ ಬಸವೇಶ್ವರ ಶುಗರ್ಸ್ ಲಿಮಿಟೆಡ್., ಕಾರಜೋಳ ವಿಜಯಪುರ ಜಿಲ್ಲೆ</td><td>6.23</td></tr>
<tr><td>4</td><td>ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಕೃಷ್ಣಾನಗರ ವಿಜಯಪುರ ಜಿಲ್ಲೆ</td><td>8.49</td></tr>
<tr><td>5</td><td>ಜಮಖಂಡಿ ಶುಗರ್ಸ್ ಲಿಮಿಟೆಡ್, ಹಿರೇಪಡಸಲಗಿ, ಜಮಖಂಡಿ ತಾಲೂಕು, ಬಾಗಲಕೋಟೆ ಜಿಲ್ಲೆ.</td><td>14.74</td></tr>
<tr><td></td><td>ಒಟ್ಟು</td><td>38.82</td></tr>
</table>
ಸಕ್ಕರೆ ಕಾರ್ಖಾನೆಗಳು ರೈತರಿಗೆ ಕಬ್ಬಿನ ಬಿಲ್ ಪಾವತಿ ವಿಳಂಬವಾಗಲು ಕಾರಣಗಳು ಈ ಕೆಳಕಂಡಂತಿವೆ.<br>
i. ರಾಜ್ಯದ ಸಕ್ಕರೆ ಕಾರ್ಖಾನೆಗಳಲ್ಲಿ ಸಕ್ಕರೆ ದಾಸ್ತಾನು ಹೆಚ್ಚಾಗಿದ್ದರೂ ಸಹ ಕೇಂದ್ರ ಸರ್ಕಾರದಿಂದ ಮಾಸಿಕವಾಗಿ ಹೊರಡಿಸುವ ಸಕ್ಕರೆ ಮಾರಾಟದ ಆದೇಶವು ಕಡಿಮೆ ಪ್ರಮಾಣದಲ್ಲಿರುವುದರಿಂದ ರೈತರಿಗೆ ನಿಗದಿತ ಸಮಯದಲ್ಲಿ ಹಣ ಪಾವತಿಸಲು ಸಕ್ಕರೆ ಕಾರ್ಖಾನೆಗಳಿಗೆ ಅವಕಾಶ ಸಿಗುತ್ತಿಲ್ಲ.</td></tr>
</table>

| | | |
|---|---|---|
| | | ii. ಬಿ-ಹೇವಿ ಮತ್ತು ಸಿ-ಹೇವಿ ಮೊಲಾಸಿಸ್‌ನಿಂದ ಉತ್ಪಾದಿಸುವ ಎಥನಾಲ್‌ನಲ್ಲಿ ಸಲ್ಫರ್ ಪ್ರಮಾಣ ಇರುವುದರಿಂದ ಓ.ಎಂ.ಸಿಸ್‌ಗಳು 3 ತಿಂಗಳಾದರೂ ಸಹ ಖರೀದಿಸುತ್ತಿಲ್ಲ. |
| (ಈ) | ಕಬ್ಬು ಬೆಳೆಗಾರರ ಹಿತ ಕಾಪಾಡುವಲ್ಲಿ ರೈತರ ಬಿಲ್ ಬಾಕಿಯನ್ನು ಶೂನ್ಯಕ್ಕೆ ಇಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕೇಂದ್ರ ಸರ್ಕಾರದ ಕಬ್ಬು (ನಿಯಂತ್ರಣ) ಆದೇಶ 1966 ರ ಕಲಂ 3(8)ರನ್ವಯ ಕಬ್ಬು ಸರಬರಾಜು ಮಾಡಿದ ರೈತರಿಗೆ ನಿಗದಿತ ಅವಧಿಯೊಳಗೆ ಕಬ್ಬಿನ ಬಿಲ್ಲನ್ನು ಪಾವತಿಸಿದೇ ಇದ್ದರೇ ಸಂಬಂಧಪಟ್ಟ ಜಿಲ್ಲಾಧಿಕಾರಿಯವರಿಗೆ ವಸೂಲಾತಿ ಪ್ರಮಾಣ ಪತ್ರ ಜಾರಿಗೊಳಿಸಿ ಕಾರ್ಖಾನೆಯಲ್ಲಿರುವ ಸಕ್ಕರೆ, ಮೊಲಾಸಿಸ್ ಮತ್ತು ಉಪ ಉತ್ಪನ್ನಗಳನ್ನು ಮಾರಾಟ ಮಾಡಿ ರೈತರಿಗೆ ಹಣ ಪಾವತಿಸಲು ಅವಕಾಶಗಳಿರುತ್ತವೆ.<br>2024-25ನೇ ಹಂಗಾಮಿನಲ್ಲಿ ಕಬ್ಬು ಬಿಲ್ಲು ಉಳಿಸಿಕೊಂಡಿದ್ದ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ದಿನಾಂಕ:16.01.2025 ಮತ್ತು 04.02.2025 ರಂದು ಶಾಸನಬದ್ಧ ನೋಟೀಸ್ ಜಾರಿಗೊಳಿಸಲಾಗಿರುತ್ತದೆ. ಮುಂದುವರೆದು, ದಿನಾಂಕ: 04.02.2025, 24.02.2025, 27.02.2025, 04.03.2025 ಮತ್ತು 23.03.2025 ರಂದು ಒಟ್ಟು 47 ಸಕ್ಕರೆ ಕಾರ್ಖಾನೆಗಳಿಗೆ ವಸೂಲಾತಿ ಪ್ರಮಾಣ ಪತ್ರವನ್ನು (Recovery Certificate) ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಮೂಲಕ ಜಾರಿಗೊಳಿಸಲಾಗಿರುತ್ತದೆ. ಇವುಗಳಲ್ಲಿ 42 ಸಕ್ಕರೆ ಕಾರ್ಖಾನೆಗಳು ಕಬ್ಬು ಬಿಲ್ಲು ಬಾಕಿಯನ್ನು ಪಾವತಿಸಿರುತ್ತವೆ.<br>ಶ್ರೀ ಬಸವೇಶ್ವರ ಶುಗರ್ಸ್ ಲಿಮಿಟೆಡ್., ಕಾರಜೋಳ ವಿಜಯಪುರ ಜಿಲ್ಲೆ ಮತ್ತು ಜಮಖಂಡಿ ಶುಗರ್ಸ್ ಲಿಮಿಟೆಡ್, ಹಿರೇಪಡಸಲಗಿ, ಜಮಖಂಡಿ ತಾಲೂಕು ಬಾಗಲಕೋಟೆ ಜಿಲ್ಲೆ – ಈ ಸಕ್ಕರೆ ಕಾರ್ಖಾನೆಗಳು ವಸೂಲಾತಿ ಪ್ರಮಾಣ ಪತ್ರದ ವಿರುದ್ಧ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿದ್ದು, ಮಾನ್ಯ ಉಚ್ಚ ನ್ಯಾಯಾಲಯವು ವಸೂಲಾತಿ ಪ್ರಮಾಣ ಪತ್ರಕ್ಕೆ (Recovery Certificate) ಮಧ್ಯಂತರ ತಡೆಯಾಜ್ಞೆಯನ್ನು ನೀಡಿರುತ್ತದೆ. ಸದರಿ ತಡೆಯಾಜ್ಞೆಯನ್ನು ತೆರವುಗೊಳಿಸುವ ಸಂಬಂಧ ಆಕ್ಷೇಪಣೆ ಹೇಳಿಕೆಗಳನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲಾಗಿರುತ್ತದೆ. ವಿಚಾರಣೆಯು ಪ್ರಗತಿಯಲ್ಲಿರುತ್ತದೆ.<br>ಉಳಿದ ಮೂರು ಸಕ್ಕರೆ ಕಾರ್ಖಾನೆಗಳ ಕಬ್ಬು ಬಿಲ್ಲು ಬಾಕಿ ವಸೂಲಾತಿ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. |

ಸಂಖ್ಯೆ: ಸಿಐ 227 ಸಿಓಎಫ್ 2025

(ಶಿವಾನಂದ ಎಸ್ ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು